ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ,
ಭೂಮಾಪನ ಕಂದಾಯ ವ್ಯವಸ್ಥೆ
ಮತ್ತು ಭೂದಾಖಲೆಗಳ ಇಲಾಖೆ,
ಕೆ.ಆರ್. ವೃತ್ತ, ಬೆಂಗಳೂರು-560 001
☎:: 91-080-22212408
ಫ್ಯಾಕ್ಸ್: 91-080-22277528

ಸಂಖ್ಯೆ: ಸಿಬ್ಬಂದಿ/ನೇಮಕಾತಿ.164/2010-2011 ದಿನಾಂಕ 28-01-2013

## ಪ್ರಕಟಣೆ

ಈ ಮೂಲಕ ನಿಮಗೆ ತಿಳಿಯಪಡಿಸುವುದೇನೆಂದರೆ, ಇಲಾಖೆಯಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡುವ ಸಂಬಂಧ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಆಹ್ವಾನಿಸಲಾಗಿರುತ್ತದೆ. ಆ ಪ್ರಕಾರ ಭೂಮಾಪಕರ ಹುದ್ದೆಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ಫಲಿತಾಂಶದ ಆಧಾರದ ಮೇಲೆ ಪ್ರಕಟಿಸಲಾದ ತಾತ್ಕಾಲಿಕ / ಹೆಚ್ಚುವರಿ ಆಯ್ಕೆಪಟ್ಟಿಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ ಬಹುಮುಖ್ಯವಾಗಿದ್ದು, ಅದರಂತೆ ಮೂಲ ದಾಖಲೆಗಳ ಪರಿಶೀಲನೆಯನ್ನು ದಿನಾಂಕ 17-12-2012 ರಿಂದ 21-12-2012 ರವರೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ಇಲಾಖಾ ವತಿಯಿಂದ ನಡೆಸಲಾಗಿದೆ. ದಿನಾಂಕ: 17-12-2012 ರಂದು ಹಾಜರಾಗಿದ್ದ ಅಭ್ಯರ್ಥಿಗಳಿಂದ ಮೂಲ ಮತ್ತು ಜೆರಾಕ್ಸ್ ದಾಖಲೆಗಳನ್ನು ಸ್ವೀಕರಿಸಲಾಗಿದೆ. ಈ ರೀತಿ ಸ್ವೀಕರಿಸಿರುವ ಮೂಲ ದಾಖಲೆಗಳನ್ನು ಅಭ್ಯರ್ಥಿಗಳಿಗೆ ಹಿಂದಿರುಗಿಸಲಾಗುತ್ತಿರುವುದರಿಂದ, ಅಭ್ಯರ್ಥಿಗಳು ಖುದ್ದಾಗಿ ಈ ಕಛೇರಿಗೆ ಹಾಜರಾಗಿ (ಈ ಕಛೇರಿಯಿಂದ ನೀಡಲಾದ ಸ್ವೀಕೃತಿಯ ಮೂಲ ಪ್ರತಿಯೊಂದಿಗೆ) ಮೂಲ ದಾಖಲೆಗಳನ್ನು ಪಡೆದುಕೊಳ್ಳಲು ಸೂಚಿಸಿದೆ.

ಅಧ್ಯಕ್ಷರು,
ನೇಮಕಾತಿ ಸಮಿತಿ ಹಾಗೂ ಆಯುಕ್ತರು,
ಭೂಮಾಪನ ಕಂದಾಯ ವ್ಯವಸ್ಥೆ ಮತ್ತು
ಭೂದಾಖಲೆಗಳು, ಬೆಂಗಳೂರು.